ಶನಿವಾರ 16.05.2026 ಸಂಪುಟ: 68 ಸಂಚಿಕೆ: 302 ಪುಟಗಳು: 12 ಪ್ರಧಾನ ಸಂಪಾದಕ: ವಿಶ್ವೇಶ್ವರ ಭಟ್



# ವಿಶ್ವವಾಣಿ



ವಿಶ್ವಾಸವೇ ವಿಶ್ವ



## ಯುಎಇ, ಯುರೋಪ್‌ಗೆ ಮೋದಿ

ಪ್ರಧಾನಿ ನರೇಂದ್ರ ಮೋದಿ ಅವರು ಸಂಯುಕ್ತ ಅರಬ್ ಸಂಸ್ಥಾನ (ಯುಎಇ), ನೆದರ್ಲೆಂಡ್, ಸ್ವೀಡನ್, ನಾರ್ವೆ ಮತ್ತು ಇಟಲಿಗೆ ಆರು ದಿನಗಳ ಪ್ರವಾಸ ಕೈಗೊಂಡಿದ್ದಾರೆ. ಯುಎಇ ಅಧ್ಯಕ್ಷ ಶೇಖ್ ಮೊಹಮ್ಮದ್ ಬಿನ್ ಜಾಯೆದ್ ಅಲ್ ನಹ್ಯಾನ್ ಅವರೊಂದಿಗೆ ಇಂಧನ ಪೂರೈಕೆ ಮತ್ತು ಪಶ್ಚಿಮ ಏಷ್ಯಾ ಸಂಘರ್ಷದ ಕುರಿತು ಪ್ರಧಾನಿ ಚರ್ಚೆ ನಡೆಸಿದರು.

ಫಿಲಿಪ್ಪೈನ್ಸ್ ದೇಶದಲ್ಲಿ ವಿಶ್ವವಾಣಿ ಆಯೋಜಿಸಿರುವ 13ನೇ ಆವೃತ್ತಿಯ ಗ್ಲೋಬಲ್ ಅಚೀವರ್ಸ್ ಅವಾರ್ಡ್ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದ ವಿಧಾನಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಅವರು ಅಲ್ಲಿನ ವಿಶ್ವವಿಖ್ಯಾತ ಪುನಿಂಗ್ ಹಾಟ್ ಸ್ಪ್ರಿಂಗ್ ನೈಸರ್ಗಿಕ ಬಿಸಿನೀರಿನ ಜಲಪಾತಕ್ಕೆ ಮೈಯೊಡ್ಡಿ ಆನಂದಿಸಿದರು. ಮಾಜಿ ಶಾಸಕ ಸುಕುಮಾರ್ ಶೆಟ್ಟಿ, ಬಿಎಂಟಿಸಿ ಮಾಜಿ ಉಪಾಧ್ಯಕ್ಷ ಎಂ.ಆರ್. ವೆಂಕಟೇಶ್, ವಿಶ್ವವಾಣಿ ಪ್ರಧಾನ ಸಂಪಾದಕ ವಿಶ್ವೇಶ್ವರ ಭಟ್, ವಿಶ್ವವಾಣಿ ಪುಸ್ತಕ ವ್ಯವಸ್ಥಾಪಕ ನಿರ್ದೇಶಕಿ ಸುಷ್ಮಾ ಭಟ್ ಸೇರಿ ಹಲವು ಗಣ್ಯರು ಪ್ರವಾಸದಲ್ಲಿ ಪಾಲ್ಗೊಂಡಿದ್ದರು.

### ಸೊಂಪಾದ ಪುಟಗಳು



ಹಿಜಾಬ್: ಇರಾನ್‌ನಲ್ಲಿ ಬಂಡಾಯ, ಕರ್ನಾಟಕದಲ್ಲಿ ಬೇಡಿಕೆ
ವೀಕೆಂಡ್ ವಿತ್ ಮೋಹನ್ | ಮೋಹನ್ ವಿಶ್ವ | 6



ಕೇಸರಿಮಯ ಆಯಿತು ಪಶ್ಚಿಮ ಬಂಗಾಳ
ಪ್ರಕಾಶಪಥ | ಪ್ರಕಾಶ್ ಶೇಷರಾಘವಾಚಾರ್ | 7

### ದಾರಿದೀಪೋಕ್ತಿ

ಜೀವನ ಅಂದ್ರೆ ಬಾಕ್ಸಿಂಗ್ ರಿಂಗ್ ಇದ್ದಂತೆ. ನೀವು ನೆಲಕ್ಕೆ ಬಿದ್ದ ತಕ್ಷಣ ಸೋತಿದ್ದೀರಿ ಎಂದು ಘೋಷಿಸುವುದಿಲ್ಲ. ನಿಮಗೆ ಏಳಲು ಸಾಧ್ಯವಾಗುವುದಿಲ್ಲ ಅಂದಾಗ ಮಾತ್ರ ಸೋತಿದ್ದೀರಿ ಎಂದು ಅಂಪೈರ್ ತೀರ್ಪು ಕೊಡುತ್ತಾರೆ. ಬದುಕಿನಲ್ಲಿ ಬಿದ್ದಾಗ ಸೋಲು ಎಂದು ಭಾವಿಸಬಾರದು.

### ವಕ್ರತುಂಡೋಕ್ತಿ


ಮದುವೆ ಅನ್ನೋದು ಗೂಗಲ್ ಮ್ಯಾಪ್ ಇದ್ದ ಹಾಗೆ. ಹೋಗಬೇಕಾದ ದಾರಿ ನಮಗೆ ಗೊತ್ತಿದ್ದರೂ, ಪಕ್ಕದಲ್ಲಿ ಕುಳಿತವರು 'ರೀ ರೂಟಿಂಗ್' (Re-routing) ಮಾಡುತ್ತಾ ಇರುತ್ತಾರೆ.

## ಚುನಾವಣೆಗೆ ತೆರೆ: ಪೆಟ್ರೋಲ್, ಡೀಸೆಲ್ ಬೆಲೆ 3 ರು. ಏರಿಕೆ
## ಸಿಎನ್‌ಜಿ ದರವೂ ಹೆಚ್ಚಳ, ಖಾಸಗಿ ಬಸ್ ಯಾನವೂ ದುಬಾರಿ

# ಬೆಲೆ ಏರಿಕೆಯ ಬರೆ

**ದೆಹಲಿ:** ಕೊಲ್ಲಿ ಯುದ್ಧದ ಪರಿಣಾಮ ಜಾಗತಿಕ ಮಾರುಕಟ್ಟೆಯಲ್ಲಿ ಕಚ್ಚಾ ತೈಲದ ಬೆಲೆ ಏರಿಕೆಯಾಗಿರುವ ಹಿನ್ನೆಲೆಯಲ್ಲಿ ತೈಲ ಕಂಪನಿಗಳು ಶುಕ್ರವಾರ ದೇಶದಾದ್ಯಂತ ಪೆಟ್ರೋಲ್ ಮತ್ತು ಡೀಸೆಲ್ ದರವನ್ನು ಲೀಟರ್‌ಗೆ ತಲಾ 3 ರು. ಹೆಚ್ಚಳ ಮಾಡಿವೆ. ಇದರ ಜತೆಗೆ ಸಿಎನ್‌ಜಿ ಅನಿಲದ ಬೆಲೆಯನ್ನೂ ಪ್ರತಿ ಕಿಲೋಗೆ 2 ರು. ಹೆಚ್ಚಿಸಲಾಗಿದೆ. ನೂತನ ಪರಿಷ್ಕೃತ ದರವು ಶುಕ್ರವಾರ ಬೆಳಗಿನಿಂದಲೇ ಜಾರಿ ಆಗಿದ್ದು ವಾಹನ ಸವಾರರಿಗೆ ಬೆಲೆ ಏರಿಕೆ ಬಿಸಿ ತಟ್ಟಿದೆ.

ಈಗಾಗಲೇ ಎಲ್‌ಪಿಜಿ, ವಿದ್ಯುತ್, ನೀರು, ಆಸ್ತಿ ತೆರಿಗೆ, ಹೊಟೇಲ್ ತಿಂಡಿ ದರ ಸೇರಿದಂತೆ ಅಗತ್ಯ ಸೇವೆ ಮತ್ತು ಸರಕುಗಳ ದರ ಏರಿಕೆಯಿಂದ ತತ್ತರಿಸಿರುವ ಜನಸಾಮಾನ್ಯರಿಗೆ ಪೆಟ್ರೋಲಿಯಂ ಉತ್ಪನ್ನಗಳ ದರ ಏರಿಕೆಯು ಮತ್ತೊಂದು ಹೊರೆ ಹೊರಿಸಿದೆ. ಬೆಂಗಳೂರಲ್ಲಿ ಪೆಟ್ರೋಲ್ ದರ ಲೀಟರಿಗೆ 3.26 ರೂ. ಹಾಗೂ ಡೀಸೆಲ್ ಬೆಲೆ 3.12 ರೂ. ಹೆಚ್ಚಳ ಆಗಿದೆ. ಇದರಿಂದ ಪ್ರತಿ ಲೀಟರ್ ಪೆಟ್ರೋಲ್ ದರ 106.17 ರು. ಏರಿಕೆಯಾದರೆ ಡೀಸೆಲ್ ದರ 94.10 ರು. ತಲುಪಿದೆ. ರಾಷ್ಟ್ರ ರಾಜಧಾನಿ ದೆಹಲಿ ಹೊರತುಪಡಿಸಿ ಉಳಿದ ಮೂರು ಮೆಟ್ರೋ ನಗರಗಳಾದ ಕೋಲ್ಕತ್ತಾ, ಮುಂಬೈ ಮತ್ತು ಚೆನ್ನೈನಲ್ಲಿ ಬೆಂಗಳೂರಿಗಿಂತಲು ಹೆಚ್ಚಿನ ಏರಿಕೆ ಆಗಿದೆ. ಪ್ರಧಾನಿ ನರೇಂದ್ರ ಮೋದಿ ಅವರು ದೇಶದ ಜನತೆ ಡೀಸೆಲ್ ಮತ್ತು ಪೆಟ್ರೋಲ್ ಮಿತವಾಗಿ ಬಳಸಬೇಕೆಂದು ಕರೆಕೊಟ್ಟ ಬೆನ್ನಲ್ಲೇ ತೈಲ ಕಂಪನಿಗಳು ದರ ಹೆಚ್ಚಳ ಮಾಡಿವೆ. → 4



### ಹೊಸ ದರ ಬೆಂಗಳೂರು

| ಪೆಟ್ರೋಲ್ (ಲೀಟರಿಗೆ) | ಡೀಸೆಲ್ (ಲೀಟರಿಗೆ) |
|---|---|
| ₹106.17 | ₹94.10 |
| ₹3.26+ | ₹3.12+ |
| ₹102.91 (ಹಳೆದರ) | ₹90.98 (ಹಳೆದರ) |

| ಸಿಎನ್‌ಜಿ (ಪ್ರತಿ ಕಿಲೋ) | ಖಾಸಗಿ ಬಸ್ ಟಿಕೆಟ್ ದರ |
|---|---|
| ₹93 | 20% ಹೆಚ್ಚಳ |
| ₹3+ | |
| ₹90(ಹಳೆದರ) | |

ಕಚ್ಚಾ ತೈಲದ ದರ ಕಡಿಮೆಯಿದ್ದಾಗ ಅದರ ಲಾಭವನ್ನು ಮೋದಿ ಸರಕಾರ ಎಂದಿಗೂ ಜನತೆಗೆ ಬಿಟ್ಟುಕೊಟ್ಟಿಲ್ಲ. ಈಗ ದರ ಏರಿಕೆಯಾದಾಗ ಅದರ ಸಂಪೂರ್ಣ ಭಾರವನ್ನು ಜನಸಾಮಾನ್ಯರ ಮೇಲೆ ಹೊರಿಸಿ ಕೈತೊಳೆದುಕೊಳ್ಳುತ್ತಿದೆ. ಇದು ಆಡಳಿತ ನಡೆಸುವ ಕ್ರಮವಲ್ಲ.

-**ಸಿದ್ದರಾಮಯ್ಯ**, ಮುಖ್ಯಮಂತ್ರಿ

### ಸಿಎನ್‌ಜಿ ದರವೂ ಏರಿಕೆ

**ದೆಹಲಿ:** ಪೆಟ್ರೋಲ್,ಡೀಸೆಲ್ ದರ ಏರಿಕೆಯಾದ ಬೆನ್ನಲ್ಲೇ ಸಾಂದ್ರೀಕೃತ ನೈಸರ್ಗಿಕ ಅನಿಲ (ಸಿಎನ್‌ಜಿ) ಬೆಲೆಯನ್ನೂ ತಕ್ಷಣದಿಂದ ಜಾರಿಗೆ ಬರುವಂತೆ ಪ್ರತಿ ಕಿಲೋಗೆ 2 ರು.ಗಳಷ್ಟು ಏರಿಸಲಾಗಿದೆ. ದರ ಏರಿಕೆಯಿಂದ ಬೆಂಗಳೂರಿನಲ್ಲಿ 1 ಕೆಜಿ ಸಿಎನ್‌ಜಿ ದರ 93 ರು.ಗೆ ಏರಿಕೆಯಾಗಿದೆ. ವಿವಿಧ ಭಾಗಗಳಲ್ಲಿ ಅಥವಾ ವಿತರಕರ (ಗ್ಯಾಸ್ ಕಂಪನಿಗಳು) ಆಧಾರದ ಮೇಲೆ ಬೆಲೆಯಲ್ಲಿ 30 ಪೈಸೆಯಿಂದ 1 ರು. ರವರೆಗೆ ವ್ಯತ್ಯಾಸ ಇರಲಿದೆ. ಆಟೋರಿಕ್ಷಾಗಳು, ಕ್ಯಾಬ್‌ಗಳು ವೆಚ್ಚ ಕಡಿಮೆ ಮಾಡಲು ಸಿಎನ್‌ಜಿ ಬಳಸುತ್ತವೆ. ಸಣ್ಣ ಲಾರಿಗಳು, ಟೆಂಪೋಗಳು ಮತ್ತು ಡೆಲಿವರಿ ವ್ಯಾನ್‌ಗಳು ಸಿಎನ್‌ಜಿ ಇಂಧನ ಬಳಸುತ್ತವೆ. ಸಿಎನ್‌ಜಿ ದರ ಏರಿಕೆಯಿಂದ ಈ ವಾಹನಗಳ ಬಾಡಿಗೆ ದರವೂ ಏರಿಕೆಯಾಗುವ ನಿರೀಕ್ಷೆ ಇದೆ.

### ಆಟೋ ದರ ಏರಿಕೆ?

ತೈಲ ಬೆಲೆ ಏರಿಕೆಯ ಬೆನ್ನಲ್ಲೇ ಖಾಸಗಿ ಬಸ್ ಮಾಲೀಕರು ಟಿಕೆಟ್ ದರದಲ್ಲಿ ಶೇ.20ರಷ್ಟು ಹೆಚ್ಚಳ ಮಾಡಿದ್ದು, ಶುಕ್ರವಾರದಿಂದಲೇ ಹೊಸ ದರಗಳು ಜಾರಿಗೆ ಬರಲಿವೆ ಎಂದು ಕರ್ನಾಟಕ ಖಾಸಗಿ ಬಸ್ ಮಾಲೀಕರ ಸಂಘ ಸ್ಪಷ್ಟಪಡಿಸಿದೆ. ಈ ಬಗ್ಗೆ ಮಾತನಾಡಿರುವ ಖಾಸಗಿ ಬಸ್ ಮಾಲೀಕರ ಸಂಘದ ಅಧ್ಯಕ್ಷ ನಟರಾಜ್ ಶರ್ಮಾ, ತೈಲ ಬೆಲೆಗಳ ಹೆಚ್ಚಳದ ಪರಿಣಾಮವಾಗಿ ಎದುರಾಗುವ ಹೆಚ್ಚುವರಿ ಹೊರೆಯನ್ನು ಸರಿದೂಗಿಸಲು ಟಿಕೆಟ್ ದರ ಹೆಚ್ಚಿಸುವುದು ಅನಿವಾರ್ಯ. ನಮಗೂ ಅನ್ಯ ಮಾರ್ಗವಿಲ್ಲ ಎಂದು ಹೇಳಿದ್ದಾರೆ. ಇನ್ನು ಸಿಎನ್‌ಜಿ ದರವೂ ಏರಿಕೆಯಾಗಿರುವುದರಿಂದ ಆಟೋ ದರದಲ್ಲಿಯೂ ಏರಿಕೆಯಾಗುವ ಸಾಧ್ಯತೆಯಿದೆ ಎನ್ನಲಾಗಿದೆ.

## ಮುಂದಿನ ವರ್ಷದಿಂದ ಕಂಪ್ಯೂಟರ್ ಆಧಾರಿತ ಪರೀಕ್ಷೆ: ಸಚಿವ ಪ್ರಧಾನ್

# ಜೂನ್ 21ಕ್ಕೆ ಮತ್ತೆ NEET

**ದೆಹಲಿ:** ಜೂನ್ 21 ರಂದು ನೀಟ್ ಯುಜಿ ಮರು ಪರೀಕ್ಷೆ ನಡೆಸಲಾಗುವುದು ಎಂದು ರಾಷ್ಟ್ರೀಯ ಪರೀಕ್ಷಾ ಏಜೆನ್ಸಿ ಅಧಿಕೃತವಾಗಿ ತಿಳಿಸಿದೆ.



ಪ್ರಶ್ನೆ ಪತ್ರಿಕೆ ಸೋರಿಕೆ ಮತ್ತು ಅಕ್ರಮಗಳ ಆರೋಪದ ಹಿನ್ನೆಲೆಯಲ್ಲಿ ಮೇ 3ರಂದು ನಡೆದಿದ್ದ ನೀಟ್ ಪರೀಕ್ಷೆಯನ್ನು ರದ್ದುಗೊಳಿಸಿ ದ್ದರಿಂದ ಈಗ ಮರು ಪರೀಕ್ಷೆಯ ದಿನಾಂಕವನ್ನು ಪ್ರಕಟಿಸಲಾಗಿದೆ.

ಇದೇ ವೇಳೆ ಮುಂದಿನ ವರ್ಷದಿಂದ ಕಂಪ್ಯೂಟರ್ ಆಧಾರಿತ ನೀಟ್ ಪರೀಕ್ಷೆ ನಡೆಸಲಾಗುವುದು ಎಂದು ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ತಿಳಿಸಿದ್ದಾರೆ. ನೀಟ್ ಪರೀಕ್ಷೆ ನಡೆಸುವ ಹೊಸ ದಿನಾಂಕ ಘೋಷಣೆ ಮಾಡಿದ ನಂತರ ಮಾತನಾಡಿದ ಅವರು, ಪತ್ರಿಕೆ ಸೋರಿಕೆಗೆ ಕಾರಣರಾದವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳುವುದಾಗಿ ತಿಳಿಸಿದರು. ಮೇ ತಿಂಗಳಲ್ಲಿ ನಡೆದ ಪರೀಕ್ಷೆಯನ್ನು ರದ್ದುಗೊಳಿಸುವ ನಿರ್ಧಾರವನ್ನು ಪ್ರತಿಭಾನ್ವಿತ ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ತೆಗೆದುಕೊಳ್ಳಲಾಗಿದೆ ಎಂದು ಹೇಳಿದರು.

ಪತ್ರಿಕೆ ಸೋರಿಕೆ ಸಂಬಂಧ ಸಮಗ್ರವಾಗಿ ತನಿಖೆ ಮಾಡಲಾಗುತ್ತಿದೆ. ತನಿಖಾ ಸಂಸ್ಥೆಗಳು ನೀಡುವ ವರದಿಯನ್ನು ಗಮನದಲ್ಲಿಟ್ಟುಕೊಂಡು ಮುಂದಿನ ಪರೀಕ್ಷೆ ವೇಳೆ ಸೂಕ್ತ ಮುನ್ನಚ್ಚರಿಕೆ ವಹಿಸಲಾಗುವುದು ಎಂದವರು ತಿಳಿಸಿದರು. ಸಿಬಿಐ ಪ್ರಕರಣದ ತನಿಖೆ ನಡೆಸುತ್ತಿದೆ. ಹೆಚ್ಚಿನ ವಿವರಗಳಿಗಾಗಿ ವಿದ್ಯಾರ್ಥಿಗಳು ಮತ್ತು ಪೋಷಕರು ಅಧಿಕೃತ ವೆಬ್‌ಸೈಟ್ ಅಥವಾ ಸಾಮಾಜಿಕ ಜಾಲತಾಣವನ್ನು ಮಾತ್ರ ಅವಲಂಬಿಸಬೇಕೆಂದು ಎನ್‌ಟಿಎ ಮನವಿ ಮಾಡಿದೆ.

### ವಂಚಕ ಕುಟುಂಬದ ಮೂವರ ಸೆರೆ

2025ರ ನೀಟ್ ಪರೀಕ್ಷೆಯಲ್ಲಿ ತೇರ್ಗಡೆಯಾಗಿದ್ದ ರಾಜಸ್ಥಾನದ ಒಂದೇ ಕುಟುಂಬದ ನಾಲ್ವರ ಪೋಷಕರು ಪ್ರಶ್ನೆಪತ್ರಿಕೆ ಸೋರಿಕೆ ಸೋರಿಕೆ ಪ್ರಕರಣದಲ್ಲಿ ಆರೋಪಿಗಳಾಗಿದ್ದಾರೆ. ನೀಟ್ ಪರೀಕ್ಷೆ ತೇರ್ಗಡೆಯಾಗಿದ್ದ ಒಂದು ವರ್ಷದ ಬಳಿಕ ಹಗರಣದ ಸಂಬಂಧ ದಿನೇಶ್ ಬಿವಾಲ್ ಮತ್ತು ಆತನ ಸಹೋದರ ಮಂಗಿಲಾಲ್ ಬಿವಾಲ್ ಮತ್ತು ಸೋದರಳಿಯ ವಿಕಾಸ್‌ನನ್ನು ಬಂಧಿಸಲಾಗಿದೆ. ಬಿವಾಲ್ ಕುಟುಂಬದವರು ನಿಜಕ್ಕೂ ಪರೀಕ್ಷೆಯಲ್ಲಿ ಪಾಸ್ ಆಗಿದ್ದರೇ ಅಥವಾ ವೈದ್ಯಕೀಯ ಕಾಲೇಜುಗಳಲ್ಲಿ ಸೀಟುಗಳನ್ನು ಪಡೆಯಲು ನೀಟ್ ಪತ್ರಿಕೆ ಸೋರಿಕೆ ಜಾಲವನ್ನು ಬಳಸಿದ್ದರೇ ಎಂಬ ಬಗ್ಗೆ ತನಿಖೆ ನಡೆಸಲಾಗುತ್ತಿದೆ. → 4

## ಸೇತುವೆಯಿಂದ ಬಿದ್ದ ಟ್ರ್ಯಾಕ್ಟರ್: 7 ಮಂದಿ ಸಾವು

**ಕೊಪ್ಪಳ:** ಜಿಲ್ಲೆಯ ಮುನಿರಾಬಾದ್ ಸಮೀಪದ ತುಂಗಭದ್ರಾ ಸೇತುವೆ ಮೇಲೆ ಸಂಭವಿಸಿದ ಭೀಕರ ರಸ್ತೆ ಅಪಘಾತದಲ್ಲಿ ಒಂದೇ ಕುಟುಂಬದ ಏಳು ಮಂದಿ ಮೃತಪಟ್ಟಿದ್ದು, 10ಕ್ಕೂ ಹೆಚ್ಚು ಮಂದಿ ಗಂಭೀರವಾಗಿ ಗಾಯಗೊಂಡಿದ್ದಾರೆ. ವಿಜಯನಗರ ಜಿಲ್ಲೆ ಹಾಗೂ ಕೊಪ್ಪಳ ಜಿಲ್ಲೆಯ ಗಡಿಭಾಗದಲ್ಲಿರುವ ಟಿಬಿ ಡ್ಯಾಂ ಸಮೀಪ ಈ ದುರಂತ ಸಂಭವಿಸಿದೆ. ಹುಲಿಗೆಮ್ಮ ದೇವಸ್ಥಾನಕ್ಕೆ ದೇವರ ಕಾರ್ಯಕ್ಕಾಗಿ ತೆರಳುತ್ತಿದ್ದ ಕುಟುಂಬಸ್ಥರು ಟ್ರ್ಯಾಕ್ಟರ್‌ನಲ್ಲಿ ಪ್ರಯಾಣಿಸುತ್ತಿದ್ದ ವೇಳೆ, ಹಿಂಬದಿಯಿಂದ ವೇಗವಾಗಿ ಬಂದ ಟ್ಯಾಂಕರ್, ಟ್ರ್ಯಾಕ್ಟರ್‌ಗೆ ಡಿಕ್ಕಿ ಹೊಡೆದಿದೆ. ಡಿಕ್ಕಿಯ ರಭಸಕ್ಕೆ ಟ್ರ್ಯಾಕ್ಟರ್ ಸೇತುವೆ ಮೇಲಿಂದ ಕೆಳಗೆ ಬಿದ್ದಿದೆ. ಮೃತರು ವಿಜಯನಗರ ಜಿಲ್ಲೆಯ ಕೂಡ್ಲಿಗಿ ತಾಲೂಕಿನ ಮಲ್ಲಾಯನಹಳ್ಳಿ ಗ್ರಾಮದವರು ಎಂದು ಗುರುತಿಸಲಾಗಿದೆ.

## ಜಾಮೀನು ಅರ್ಜಿ ವಜಾ, ತ್ವರಿತ ವಿಚಾರಣೆಗೆ ಆದೇಶ

# ದರ್ಶನ್‌ಗೆ ಇನ್ನೊಂದು ವರ್ಷ ಸೆರೆವಾಸವೇ ಗತಿ

**ದೆಹಲಿ:** ಚಿತ್ರದುರ್ಗದ ರೇಣುಕಾಸ್ವಾಮಿ ಕೊಲೆ ಪ್ರಕರಣಕ್ಕೆ ಸಂಬಂಧಿಸಿದಂತೆ, ನಟ ದರ್ಶನ್‌ಗೆ ಸುಪ್ರೀಂ ಕೋರ್ಟ್‌ನಲ್ಲಿ ಭಾರಿ ಹಿನ್ನಡೆಯಾಗಿದ್ದು, ಇನ್ನೊಂದು ವರ್ಷ ಜೈಲಿನಲ್ಲಿಯೇ ಕಳೆಯುವುದು ಅನಿವಾರ್ಯವಾಗಿದೆ. ಕೊಲೆ ಪ್ರಕರಣಕ್ಕೆ ಸಂಬಂಧಿಸಿ ಜಾಮೀನು ಕೋರಿ ಸಲ್ಲಿಸಿದ ಅರ್ಜಿಯ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಜೆ.ಬಿ. ಪರ್ದಿವಾಲಾ ಮತ್ತು ನ್ಯಾ. ವಿಜಯ್ ಬಿಷ್ಣೋಯಿ ಅವರ ಪೀಠವು ಜಾಮೀನು ಅರ್ಜಿಯನ್ನು ತಿರಸ್ಕರಿಸಿ, ಒಂದು ವರ್ಷದ ಬಳಿಕ ಅರ್ಜಿ ಸಲ್ಲಿಸುವಂತೆ ತಿಳಿಸಿದೆ. ಇದರಿಂದ ಇನ್ನೊಂದು ವರ್ಷ ದರ್ಶನ್ ಜೈಲಿನಲ್ಲಿಯೇ ಕಳೆಯುವ ಸ್ಥಿತಿ ನಿರ್ಮಾಣವಾಗಿದೆ. → 4



### ಸುಪ್ರೀಂ ಆದೇಶದಲ್ಲಿ ಏನಿದೆ?

- ಒಂದು ವರ್ಷದೊಳಗೆ ವಿಚಾರಣಾ ಪ್ರಕ್ರಿಯೆಯನ್ನು ಪೂರ್ಣಗೊಳಿಸಬೇಕು. ಸಾಧ್ಯವಾದರೆ ದಿನಂಪ್ರತಿ ವಿಚಾರಣೆ ನಡೆಸಬೇಕು.
- ಒಂದು ವರ್ಷದ ಅವಧಿಯಲ್ಲಿ ವಿಚಾರಣೆ ಮುಗಿಯದಿದ್ದರೆ ಅರ್ಜಿದಾರರು ಮತ್ತೆ ಜಾಮೀನಿಗಾಗಿ ಅರ್ಜಿ ಸಲ್ಲಿಸಬಹುದು.
- ಸೆಷನ್ಸ್ ಕೋರ್ಟ್‌ಗೆ ಹೊಸ ನ್ಯಾಯಾಧೀಶರನ್ನು ನಿಯೋಜಿಸಲು ಹೈಕೋರ್ಟ್‌ಗೆ ಸೂಚನೆ.
- 60 ಪ್ರಮುಖ ಸಾಕ್ಷಿಗಳ ವಿಚಾರಣೆ ಮೊದಲು ಪೂರ್ಣಗೊಳಿಸಬೇಕು. ಜೈಲು ಮ್ಯಾನ್ಯುಯಲ್ ಪ್ರಕಾರ ದರ್ಶನ್‌ಗೆ ಅಗತ್ಯ ಸೌಲಭ್ಯ ಒದಗಿಸಬೇಕು.

## ಮಳೆಗೆ ಆರು ಮಂದಿ ಬಲಿ

**ಬೆಂಗಳೂರು:** ರಾಜ್ಯದ ಹಲವು ಜಿಲ್ಲೆಗಳಲ್ಲಿ ಗುರುವಾರ ರಾತ್ರಿ ಗುಡುಗು ಸಿಡಿಲು ಸಹಿತ ಭಾರೀ ಮಳೆಯಾಗಿದ್ದು, ಒಂದೇ ಕುಟುಂಬದ ನಾಲ್ವರು ಸೇರಿ ಆರು ಮಂದಿ ಮಳೆ ಸಂಬಂಧಿ ದುರ್ಘಟನೆಗಳಿಗೆ ಬಲಿಯಾಗಿದ್ದಾರೆ. ವಿಜಯಪುರ ಜಿಲ್ಲೆಯ ಆಲಮೇಲ ತಾಲೂಕಿನ ಮೊರಟಗಿ ಗ್ರಾಮದಲ್ಲಿ ಬಿರುಗಾಳಿ ಮಳೆಗೆ ಮನೆಯ ಮೇಲ್ಛಾವಣಿ ಕುಸಿದು ಬಿದ್ದ ಪರಿಣಾಮ ಪತಿ, ಪತ್ನಿ, ಇಬ್ಬರು ಮಕ್ಕಳು ಸ್ಥಳದಲ್ಲೇ ಮೃತಪಟ್ಟಿದ್ದಾರೆ. ಗುರುನಾಥ್ ಬಡಿಗೇರ (35), ಜ್ಯೋತಿ ಬಡಿಗೇರ (28), ಕಾಳಮ ಬಡಿಗೇರ (13), ಕೀರ್ತಿ ಬಡಿಗೇರ (9) ಮೃತರು. ಗುರುನಾಥ್ ಅವರು ಸ್ವಂತ ಮನೆಯನ್ನು ದುರಸ್ತಿ ಮಾಡಿಸುತ್ತಿದ್ದ ಕಾರಣ ಬಾಡಿಗೆ ಮನೆಯಲ್ಲಿ ವಾಸವಿದ್ದರು. ಮನೆಯ ಮೇಲ್ಛಾವಣಿ ಏಕಾಏಕಿ ಕುಸಿದು ನಾಲ್ವರು ಸಮಾಧಿಯಾಗಿದ್ದಾರೆ.




## ಸಿಎಂ ಶೀಘ್ರವೇ ದೆಹಲಿಗೆ, ಸಂಪುಟ ಪುನಾರಚನೆಗೆ ಹೈಕಮಾಂಡ್ ಗ್ರೀನ್ ಸಿಗ್ನಲ್ ನಿರೀಕ್ಷೆ

# ಕೇರಳ ಪ್ರಶ್ನೆ ಇತ್ಯರ್ಥ ಬೆನ್ನಲ್ಲೇ ರಾಜ್ಯದತ್ತ ಹೈ ಚಿತ್ತ?

**ವಿಶ್ವವಾಣಿ ಸುದ್ದಿಮನೆ** ಬೆಂಗಳೂರು

ಕೇರಳ ಮುಖ್ಯಮಂತ್ರಿ ಆಯ್ಕೆ ಗೊಂದಲಕ್ಕೆ ಹೈಕಮಾಂಡ್ ಪರಿಹಾರ ಕಂಡುಕೊಂಡಿರುವ ಬೆನ್ನಲ್ಲೇ, ಇದೀಗ ಕರ್ನಾಟಕದಲ್ಲಿ ಕಳೆದ ನಾಲ್ಕೈದು ತಿಂಗಳಿನಿಂದ ಕೇಳಿ ಬರುತ್ತಿರುವ ಸಂಪುಟ ಪುನಾರಚನೆ, ನಾಯಕತ್ವ ಬದಲಾವಣೆ ವಿಷಯಕ್ಕೆ ಸಂಬಂಧಿಸಿ ಅಂತಿಮ ತೀರ್ಮಾನ ತೆಗೆದುಕೊಳ್ಳಲು ಸಜ್ಜಾಗಿದೆ ಎನ್ನಲಾಗಿದೆ. ನಾಯಕತ್ವ ಬದಲಾವಣೆ ಬಗ್ಗೆ ಡಿ.ಕೆ. ಶಿವಕುಮಾರ್ ಬಣದಿಂದ ನಿರಂತರ ಒತ್ತಡವಿದ್ದರೂ, ಈ ವಿಷಯದಲ್ಲಿ ಹೈಕಮಾಂಡ್ ಯಾವುದೇ ರೀತಿಯ ಚರ್ಚೆ ನಡೆಸಿಲ್ಲ. ಆದರೆ ಸರಕಾರ ಅಧಿಕಾರಕ್ಕೆ ಬಂದು ಮೂರು ವರ್ಷ ಕಳೆದಿರುವುದರಿಂದ ಸಚಿವ ಸಂಪುಟ ಪುನಾರಚನೆ ಮಾಡಲೇಬೇಕೆಂಬ ಒತ್ತಡವನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇರಿದ್ದಾರೆ. ಆದ್ದರಿಂದ ಶೀಘ್ರದಲ್ಲಿಯೇ ಸಿದ್ದರಾಮಯ್ಯ ಅವರಿಗೆ ದೆಹಲಿಗೆ ಬರುವಂತೆ ಬುಲಾವ್ ಬರುವ ಸಾಧ್ಯತೆಯಿದೆ ಎಂದು ಹೇಳಲಾಗಿದೆ. → 4

### ಮೇ 19ಕ್ಕೆ ಸಾಧನಾ ಸಮಾವೇಶ

ಮೇ 20ಕ್ಕೆ ರಾಜ್ಯ ಸರಕಾರಕ್ಕೆ 3 ವರ್ಷ ತುಂಬಲಿರುವ ಸಂಭ್ರಮದಲ್ಲಿ ಸಾಧನಾ ಸಮಾವೇಶಕ್ಕೆ ಸಿದ್ಧತೆ ನಡೆದಿದೆ. ಈ ಹಿಂದೆ 21ಕ್ಕೆ ಸಮಾವೇಶ ನಡೆಸಲು ತೀರ್ಮಾನಿಸಲಾಗಿತ್ತು. ಆದರೆ ಸಾರಿಗೆ ನೌಕರರ ಮುಷ್ಕರ 20ರಿಂದ ಶುರುವಾಗಲಿರುವುದರಿಂದ ಸಮಸ್ಯೆಯಾಗದಿರಲಿ ಎನ್ನುವ ಕಾರಣಕ್ಕೆ 19ರಂದೇ ಸಮಾವೇಶ ನಡೆಸಲು ತೀರ್ಮಾನಿಸಲಾಗಿದೆ ಎಂದು ಗೃಹ ಸಚಿವ ಡಾ.ಜಿ. ಪರಮೇಶ್ವರ್ ತಿಳಿಸಿದ್ದಾರೆ.